All India Radio: Bangalore
Regional Bulletin In Kannada
14.10.2026 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

14.10.2026 / 6.40 p.m.
<><><><>

ಮುಖ್ಯಾಂಶಗಳು

- ವಿಬಿ ಜಿ ರಾಮ್ ಜಿ ಅಡಿ ದಾಖಲೆಯ ೨ ಕೋಟಿ ೪ ಸಾವಿರ ಮಾನವ ದಿನ ಸೃಜನೆ - ಸಚಿವ ಈಶ್ವರ್ ಬಿ. ಖಂಡ್ರೆ
- ಖೈದಿಗಳು ತಯಾರಿಸಿದ ಉತ್ಪನ್ನಗಳ ಮಾರುಕಟ್ಟೆ ವಿಸ್ತರಣೆಗೆ ಕ್ರಮ ಕೈಗೊಳ್ಳುವಂತೆ ಗೃಹಸಚಿವ ಪ್ರಿಯಾಂಕ್ ಖರ್ಗೆ ಸೂಚನೆ
- ನೂತನ ರಾಜ್ಯಪಾಲರಾಗಿ ಇದೇ ಶುಕ್ರವಾರ ಲೋಕಸಭವನದಲ್ಲಿ ಡಾ.ಸುಧಾ ಯಾದವ್ ಪ್ರಮಾಣ ವಚನ
- ಮೈಸೂರು ದಸರಾ - ಈ ಬಾರಿ ಪ್ರಶಾಂತ ಆನೆಗೆ ಅಂಬಾರಿ ಹೊತ್ತು ಜಂಬೂಸವಾರಿ ಮುನ್ನಡೆಸುವ ಹೊಣೆ
- ಕಬ್ಬು ಬೆಳೆಗಾರರ ಸಮಸ್ಯೆ ಪರಿಹರಿಸಲು ಎಸ್‌ಎಪಿ ದರ ನಿಗದಿಪಡಿಸುವಂತೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ
- ರಣಜಿ ಟ್ರೋಫಿ : ಕರ್ನಾಟಕ, ಆಂಧ್ರಪ್ರದೇಶ ನಡುವಿನ ಪಂದ್ಯ ಡ್ರಾನಲ್ಲಿ ಅಂತ್ಯ

<><><><>

ಗ್ರಾಮೀಣ ಉದ್ಯೋಗ ಖಾತ್ರಿ ವಿಬಿಜಿ ರಾಮ್ ಜಿ ಅಡಿಯಲ್ಲಿ ಜುಲೈ ೧ರಿಂದ ನಿನ್ನೆಯವರೆಗೆ ದಾಖಲೆಯ ೨ ಕೋಟಿ ೪ ಲಕ್ಷ ಮಾನವ ದಿನ ಉದ್ಯೋಗ ಸೃಜಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಮನ್ರೇಗಾ ಅಡಿಯಲ್ಲಿ ಕಳೆದ ವರ್ಷ ಇದೇ ಅವಧಿಯಲ್ಲಿ ೧ ಕೋಟಿ ೭೧ ಲಕ್ಷ ಮಾನವ ದಿನ ಸೃಜನೆಯಾಗಿತ್ತು. ಈ ಬಾರಿ ಎಲ್‌ನಿನೋ ಪ್ರಭಾವದಿಂದ ಮಳೆಯ ಕೊರತೆಯಾಗಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಬಡವರಿಗೆ, ಪರಿಶಿಷ್ಟರಿಗೆ ವಂಚಿತ ಹಾಗೂ ಭೂರಹಿತ ಕೂಲಿ ಕಾರ್ಮಿಕರಿಗೆ ಉದ್ಯೋಗ ಒದಗಿಸಲಾಗಿದೆ ಎಂದು ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲೆಯಲ್ಲಿ ಒಟ್ಟಾರೆ ೨೪ ಲಕ್ಷ ಮಾನವ ದಿನ ಸೃಜಿಸಲಾಗಿದ್ದು ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ. ಬೀದರ್ ೨೧ ಲಕ್ಷ ಮಾನವ ದಿನ, ಕೊಪ್ಪಳ ೧೮ ಲಕ್ಷ ಮಾನವ ದಿನ ಸೃಜಿಸುವುದರೊಂದಿಗೆ ಎರಡು ಮತ್ತು ಮೂರನೇ ಸ್ಥಾನದಲ್ಲಿವೆ. ರಾಜ್ಯದಲ್ಲಿ ಮನ್ರೇಗಾ ಅಡಿಯಲ್ಲಿ ವಿತರಿಸಲಾಗಿದ್ದ ಜಾಬ್ ಕಾರ್ಡ್‌ಗಳ ಇ-ಕೆವೈಸಿಯನ್ನು ಮಾಡುವುದರ ಜೊತೆಗೆ ಜಾಬ್ ಕಾರ್ಡ್ ಮೇಳ ನಡೆಸಿ ಹೊಸ ಜಾಬ್ ಕಾರ್ಡ್‌ಗಳನ್ನು ವಿತರಿಸಲು ಕ್ರಮ ಕೈಗೊಂಡ ಹಿನ್ನೆಲೆಯಲ್ಲಿ, ಗುಳೆ ಹೋಗುತ್ತಿದ್ದ ನೂರಾರು ಕುಟುಂಬಗಳು ಇರುವ ಸ್ಥಳದಲ್ಲಿಯೇ ಉದ್ಯೋಗ ಪಡೆಯಲು ಅನುಕೂಲವಾಗಿದೆ. ಈ ವರ್ಷದಲ್ಲಿ ಹೊಸದಾಗಿ ೮೭ ಸಾವಿರದ ೧೭೪ ಅಧಿಕ ಜಾಬ್ ಕಾರ್ಡ್ ವಿತರಿಸಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

<><><><>

ರಾಜ್ಯದ ಕಾರಾಗೃಹಗಳಲ್ಲಿ ಖೈದಿಗಳಿಂದ ತಯಾರಿಸಲಾಗುತ್ತಿರುವ ವಿವಿಧ ಉತ್ಪನ್ನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಿ ಆಕರ್ಷಕ ಪ್ಯಾಕೇಜಿಂಗ್ ನೊಂದಿಗೆ ಮಾರುಕಟ್ಟೆ ವಿಸ್ತರಣೆಗೆ ಕ್ರಮ ಕೈಗೊಳ್ಳುವಂತೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಕರ್ನಾಟಕ ಕಾರಾಗೃಹ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ ಮಾತನಾಡಿದ ಅವರು, ಖೈದಿಗಳ ಕೌಶಲ್ಯಾಭಿವೃದ್ಧಿ ಮತ್ತು ಪುನರ್‌ವಸತಿಗೆ ಪೂರಕವಾದ ಚಟುವಟಿಕೆಗಳನ್ನು ಬಲಪಡಿಸಬೇಕು ಹಾಗೂ ತಯಾರಿಸಿದ ಉತ್ಪನ್ನಗಳಿಗೆ ಸ್ಥಿರವಾದ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><><>

ನೂತನ ರಾಜ್ಯಪಾಲರಾಗಿ ನೇಮಕಗೊಂಡಿರುವ ಹರಿಯಾಣದ ಮೂಲದ ಡಾ.ಸುಧಾ ಯಾದವ್ ಇದೇ ಶುಕ್ರವಾರ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಲೋಕಭವನದಲ್ಲಿ ಬೆಳಗ್ಗೆ ೧೦ ಗಂಟೆಗೆ ಏರ್ಪಡಿಸಿರುವ ಸರಳ ಸಮಾರಂಭದಲ್ಲಿ ನೂತನ ರಾಜ್ಯಪಾಲರಿಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭುಬಖ್ರು, ಪ್ರಮಾಣವಚನ ಬೋಧಿಸಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಿಕಟಪೂರ್ವ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಸಂಪುಟದ ಸಚಿವರು, ಪ್ರತಿಪಕ್ಷಗಳ ನಾಯಕರಿಗೆ ಆಹ್ವಾನ ನೀಡಲಾಗಿದೆ.

<><><><>

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿಯಲ್ಲಿ ಚಿನ್ನದ ಅಂಬಾರಿ ಹೊರುವ ಜವಾಬ್ದಾರಿಯನ್ನು ಈ ಬಾರಿ 'ಪ್ರಶಾಂತ' ಆನೆಗೆ ವಹಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆನೆಗಳ ಆರೋಗ್ಯ ಮತ್ತು ಸಾಮರ್ಥ್ಯವನ್ನು ಸೂಕ್ಷ್ಮವಾಗಿ ಗಮನಿಸಿ ಒಟ್ಟು ೧೩ ಆನೆಗಳನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಧ್ವನಿ : ಯತೀಂದ್ರ ಸಿದ್ದರಾಮಯ್ಯ

ಅತ್ಯಂತ ಶಾಂತ ಸ್ವಭಾವದ 'ಪ್ರಶಾಂತ' ಆನೆಯು ಅರಣ್ಯಾಧಿಕಾರಿಗಳು ನೀಡಿದ ಎಲ್ಲಾ ತಾಲೀಮುಗಳಲ್ಲೂ ಯಶಸ್ವಿಯಾಗಿ ತೇರ್ಗಡೆಯಾಗಿರುವ ಹಿನ್ನೆಲೆಯಲ್ಲಿ, ಈ ಬಾರಿ ಅಂಬಾರಿ ಹೊತ್ತು ಸಾಗುವ ಹೆಗ್ಗಳಿಗೆ ಪಾತ್ರವಾಗಿದೆ. ಪ್ರಶಾಂತ ಆನೆಗೆ ಕುಮ್ಕಿ ಆನೆಗಳಾಗಿ ರೂಪ ಹಾಗೂ ಕಾವೇರಿ ಸಾಥ್ ನೀಡಲಿವೆ. ಧನಂಜಯ ಆನೆಯನ್ನು ಮೀಸಲು ಅಂಬಾರಿ ಆನೆಯನ್ನಾಗಿ ಮತ್ತು ಗೋಪಿ ಆನೆಯನ್ನು ನೌಪತ್ ಆನೆಯನ್ನಾಗಿ ಆಯ್ಕೆ ಮಾಡಲಾಗಿದೆ. ಇದರೊಂದಿಗೆ ಮಹೇಂದ್ರ, ಏಕಲವ್ಯ ಹಾಗೂ ಸುಗ್ರೀವ ಆನೆಗಳು ಸಾಲಾನೆಗಳಾಗಿ ಜಂಬೂಸವಾರಿಯಲ್ಲಿ ಹೆಜ್ಜೆ ಹಾಕಲಿವೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ದಸರೆಯ ವೈಭವದ ಜಂಬೂಸವಾರಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೇರಳ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಆಹ್ವಾನ ನೀಡಲಾಗಿದ್ದು, ಭಾಗವಹಿಸಲು ಸಮ್ಮತಿ ಸೂಚಿಸಿದ್ದಾರೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ ತರಲಾಗುತ್ತಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ನಾಡಹಬ್ಬ ಮೈಸೂರು ದಸರಾ ಮಹೋತ್ಸವ-೨೦೨೮ರ ಅಂಗವಾಗಿ ನಡೆದ ಮಕ್ಕಳ ದಸರಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮೊದಲ ಹಂತದಲ್ಲಿ ಒಂದು ಸಾವಿರದ ೨೫೦ ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದ್ದಾರೆ.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ತಿಳಿಸಿದ್ದಾರೆ. ಕೆಪಿಎಸ್ ಶಾಲೆಗಳು, ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತ ಗುಣಮಟ್ಟದ ಶಿಕ್ಷಣ ಮತ್ತು ಅಗತ್ಯ ಸೌಲಭ್ಯಗಳನ್ನು ಹೊಂದಿರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ರಾಜ್ಯದಲ್ಲಿನ ಕಬ್ಬು ಬೆಳೆಗಾರರ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರ ಕೂಡಲೇ ಎಸ್‌ಎಪಿ ದರ ನಿಗದಿಪಡಿಸಬೇಕೆಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ತರ ಕರ್ನಾಟಕ ಭಾಗದಲ್ಲಿ ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿರುವ ರೈತರು ಎತ್ತಿರುವ ಕೆಲವು ವಿಚಾರಗಳು ಸಮಂಜಸವಾಗಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕಬ್ಬು ಬೆಳೆಯುವ ದೇಶದ ಸುಮಾರು ೧೦ ರಿಂದ ೧೨ ರಾಜ್ಯಗಳಲ್ಲಿ ಆಯಾ ರಾಜ್ಯ ಸರ್ಕಾರಗಳು ಕಬ್ಬು ಬೆಳೆಗಾರರ ಹಿತರಕ್ಷಣೆ ಮಾಡುತ್ತಿವೆ. ರಾಜ್ಯ ಸರ್ಕಾರ ಕೂಡಲೇ ಎಸ್‌ಎಪಿ ದರ ನಿಗದಿ ಮಾಡಿ ಸಕ್ಕರೆ ಕಾರ್ಖಾನೆಗಳಿಗೆ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿದ್ದಾರೆ.

<><><>

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಪ್ರಧಾನಮಂತ್ರಿ ಉಜ್ವಲ ಯೋಜನೆ' ಕುರಿತ ಒಂದು ವರದಿ ಇದೀಗ ಮೂಡಿ ಬರಲಿದೆ. ಬಡ ಕುಟುಂಬಗಳ ಮಹಿಳೆಯರಿಗೆ ಉತ್ತಮ ಆರೋಗ್ಯ ಹಾಗೂ ಸಮಾನ ಅವಕಾಶ ಕಲ್ಪಿಸುವ ಉದ್ದೇಶದಿಂದ ೨೦೧೬ರಲ್ಲಿ ಆರಂಭವಾದ 'ಪ್ರಧಾನಮಂತ್ರಿ ಉಜ್ವಲ ಯೋಜನೆ'ಯು ದೇಶಾದ್ಯಂತ ದೊಡ್ಡ ಪರಿವರ್ತನೆ ತಂದಿದೆ. ಮನೆಯ ಮಹಿಳೆಯ ಹೆಸರಿನಲ್ಲಿಯೇ ಎಲ್‌ಪಿಜಿ ಸಂಪರ್ಕ ನೀಡುವುದರ ಮೂಲಕ ಕೋಟ್ಯಂತರ ಕುಟುಂಬಗಳನ್ನು ಕಟ್ಟಿಗೆ ಒಲೆಯ ಹೊಗೆಯಿಂದ ಮುಕ್ತಗೊಳಿಸಿದೆ.

೨೦೨೬ರ ಮೇ ತಿಂಗಳ ವೇಳೆಗೆ ದೇಶದ ಬಡ ಮಹಿಳೆಯರಿಗೆ ೧೦.೫ ಕೋಟಿಗೂ ಅಧಿಕ ಉಚಿತ ಎಲ್‌ಪಿಜಿ ಸಂಪರ್ಕಗಳನ್ನು ವಿತರಿಸಲಾಗಿದೆ. ಈ ಯೋಜನೆಯಿಂದ ರಾಷ್ಟ್ರೀಯ ಮಟ್ಟದಲ್ಲಿ ಒಟ್ಟಾರೆ ಎಲ್‌ಪಿಜಿ ಸಂಪರ್ಕಗಳ ಸಂಖ್ಯೆ ೨೦೧೪ರಲ್ಲಿದ್ದ ೧೪.೫೧ ಕೋಟಿಯಿಂದ ೨೦೨೬ರಲ್ಲಿ ೩೩.೩೯ ಕೋಟಿಗೆ ಏರಿಕೆಯಾಗಿದ್ದು, ಬಳಕೆಯೂ ದುಪ್ಪಟ್ಟಾಗಿದೆ. ಅನಿಲ ಮರುಪೂರಣ ಪ್ರಮಾಣ, ೨೦೨೧-೨೨ರಲ್ಲಿ ಪ್ರತಿ ಫಲಾನುಭವಿಗೆ ಸರಾಸರಿ ೩ ಇದ್ದದ್ದು ೨೦೨೫-೨೬ರ ವೇಳೆಗೆ ಸುಮಾರು ೫ಕ್ಕೆ ಏರಿದೆ.

<><><><>

ಮುಂದಿನ ಐದು ದಿನಗಳಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು ಸೇರಿದಂತೆ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಒಳನಾಡು ಜಿಲ್ಲೆಗಳಾದ ಬೆಳಗಾವಿ, ಗದಗ, ಧಾರವಾಡ, ಹಾವೇರಿ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಕರ್ನಾಟಕದ, ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಹಲವೆಡೆ ಮಳೆಯಾಗುವ ಸಾಧ್ಯತೆಯಿದೆ ಎಂದು ಮುನ್ಸೂಚನೆ ನೀಡಿದೆ.

<><><><>

ಆಂಧ್ರಪ್ರದೇಶದ ವಿಜಯವಾಡದಲ್ಲಿ ನಡೆದ ರಣಜಿ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯ ಕರ್ನಾಟಕ ಮತ್ತು ಆಂಧ್ರಪ್ರದೇಶ ತಂಡಗಳ ನಡುವಿನ ಎಲೈಟ್ ಬಿ ಗುಂಪಿನ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಕರ್ನಾಟಕ ಮೊದಲ ಇನ್ನಿಂಗ್ಸ್‌ನಲ್ಲಿ ೨೭೪ ಹಾಗೂ ೨ನೇ ಇನ್ನಿಂಗ್ಸ್ ನಲ್ಲಿ ೩೩೭ ರನ್ ಗಳಿಸಿ ಡಿಕ್ಲೇರ್ ಮಾಡಿಕೊಂಡಿತು. ಮೊದಲ ಇನ್ನಿಂಗ್ಸ್‌ನಲ್ಲಿ ೪೧೮ ರನ್ ಗಳಿಸಿದ ಆಂಧ್ರಪ್ರದೇಶ, ೨ನೇ ಇನ್ನಿಂಗ್ಸ್‌ನಲ್ಲಿ ೫ನೇ ದಿನದಾಟದ ಅಂತ್ಯಕ್ಕೆ ೪ ವಿಕೆಟ್ ನಷ್ಟಕ್ಕೆ ೧೦೪ ರನ್ ಗಳಿಸಿತು. ಪ್ರಥಮ ಇನ್ನಿಂಗ್ಸ್ ಮುನ್ನಡೆಯ ಆಧಾರದ ಮೇಲೆ ಆಂಧ್ರಪ್ರದೇಶ ೩ ಅಂಕ ಪಡೆದರೇ ಕರ್ನಾಟಕ ೧ ಅಂಕ ಪಡೆದುಕೊಂಡಿದೆ.

<><><><>

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿಯಾಗಿಸಿಕೊಂಡು ನಡೆದಿದೆ ಎನ್ನಲಾದ ರಹಸ್ಯ ಕಾರ್ಯಾಚರಣೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಹೆಚ್.ಡಿ.ಕುಮಾರಸ್ವಾಮಿ ಮಾಡಿದ ಆರೋಪಗಳನ್ನು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಖಂಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>